ಡಾ. ಶಾಲಿನಿ ರಜನೀಶ್, ಭಾ.ಆ.ಸೇ.,
ಮುಖ್ಯ ಕಾರ್ಯದರ್ಶಿ
Dr. SHALINI RAJNEESH, I.A.S.,
Chief Secretary

ಕರ್ನಾಟಕ ಸರ್ಕಾರ
Government of Karnataka

ಸಂ: ಮುಕಾ/13091045/2026 ದಿನಾಂಕ: 11.08.2026.

## ಟಿಪ್ಪಣಿ

ಕಾರ್ಯಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳವನ್ನು ತಡೆಗಟ್ಟುವ ಹಾಗೂ ಪರಿಹರಿಸುವ ಉದ್ದೇಶದಿಂದ, 10ಕ್ಕಿಂತ ಹೆಚ್ಚು ನೌಕರರನ್ನು ಹೊಂದಿರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಯನ್ನು (Internal Committee) ರಚಿಸಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳಬೇಕಾಗಿದೆ.

ರಾಜ್ಯದಲ್ಲಿ 10ಕ್ಕಿಂತ ಹೆಚ್ಚು ನೌಕರರನ್ನು ಹೊಂದಿರುವ ಒಟ್ಟು ಸುಮಾರು 81,000 ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಿದ್ದು, ಈ ಪೈಕಿ ಸುಮಾರು 26,000 ಸಂಸ್ಥೆಗಳು ಆಂತರಿಕ ದೂರು ಸಮಿತಿಯನ್ನು ರಚಿಸಿಕೊಂಡು, ಅದರ ವಿವರಗಳನ್ನು SHE-Box ಪೋರ್ಟಲ್‌ನಲ್ಲಿ ದಾಖಲಿಸಿರುತ್ತಾರೆ. ಈ ಕಾರ್ಯದಲ್ಲಿ ಕರ್ನಾಟಕ ರಾಜ್ಯವು ದೇಶದಲ್ಲಿಯೇ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಂತರಿಕ ದೂರು ಸಮಿತಿಗಳನ್ನು ರಚಿಸಿ SHE-Box ಪೋರ್ಟಲ್‌ನಲ್ಲಿ ದಾಖಲಿಸಿರುವ ರಾಜ್ಯವಾಗಿ ಪ್ರಥಮ ಸ್ಥಾನದಲ್ಲಿದೆ.

ಬಾಕಿ ಇರುವ 55000 ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಗಳನ್ನು ಕಡ್ಡಾಯವಾಗಿ ರಚಿಸಲು ಹಾಗೂ ಅದರ ವಿವರಗಳನ್ನು SHE-Box ಪೋರ್ಟಲ್‌ನಲ್ಲಿ ದಾಖಲಿಸಲು ಜಿಲ್ಲಾಧಿಕಾರಿಗಳು ತಮ್ಮ ಜಿಲ್ಲೆಗಳ ಜಿಲ್ಲಾ ನೋಡಲ್ ಅಧಿಕಾರಿಗಳಾಗಿದ್ದು, ಜಿಲ್ಲಾಧಿಕಾರಿಗಳೊಂದಿಗೆ ಅನುಸರಣೆ ಮಾಡಿ **ಒಂದು ತಿಂಗಳೊಳಗೆ ಪೂರ್ಣಗೊಳಿಸಿ,** ಕೈಗೊಂಡ ಕ್ರಮದ ಸಮಗ್ರ ವರದಿಯನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

**(ಡಾ. ಶಾಲಿನಿ ರಜನೀಶ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ

**ಇವರಿಗೆ:**
**ಶ್ರೀಮತಿ ಸಲ್ಮಾ ಕೆ. ಫಾಹಿಮಾ, ಭಾ.ಆ.ಸೇ.,**
ಸರ್ಕಾರದ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

ಕೊಠಡಿ ಸಂಖ್ಯೆ: 320, 3ನೇ ಮಹಡಿ, ವಿಧಾನಸೌಧ, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001, ದೂರವಾಣಿ ಕಛೇರಿ: +91-80-22252442 / 22033300, ಫ್ಯಾಕ್ಸ್: +91-80-22258913
Room No. 320, 3rd Floor, Vidhana Soudha, Dr.B.R. Ambedkar Veedi, Bengaluru - 560 001, Phone. off. +91-80-22252442 / 22033300, Fax: +91-80-22258913
E-mail : cs@karnataka.gov.in